# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ಆಂತರಿಕ ಪಿಪಿಪಿ ಕೋಶವನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ: ಐಡಿಡಿ 1 ಐಟಿಎಸ್ 2019 ದಿನಾಂಕ: 09/08/2021.

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರ ಅನಧಿಕೃತ ಟಿಪ್ಪಣಿಯಲ್ಲಿ ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಗೆ ತೆಗೆದುಕೊಳ್ಳಲಾಗುವ ಮೂಲಸೌಕರ್ಯ ಯೋಜನೆಗಳು ಖಾಸಗಿ ಹೂಡಿಕೆಯ ಸಹಭಾಗಿತ್ವವನ್ನು ಹೊಂದಿ, ಯೋಜನೆಯ ಪರಿಕಲ್ಪನೆಯ ಹಂತದಿಂದ ಮುಕ್ತಾಯದ ಹಂತದವರೆವಿಗೂ ದೀರ್ಘಕಾಲಿನ (15ರಿಂದ 30 ವರ್ಷಗಳವರೆಗಿನ) ಯೋಜನೆಗಳಾಗಿದ್ದು, ಪಿಪಿಪಿ ಯೋಜನೆಗಳ ಸಕಾರಾತ್ಮಕ ಪರಿಣಾಮಕ್ಕೆ ಹಾಗೂ ಕಾಲಾನುಸಾರ ಮಾರ್ಗದರ್ಶನ, ಸಮನ್ವಯ, ಅನುಮೋದನೆ, ಮೇಲ್ವಿಚಾರಣೆ, ಸಮಸ್ಯೆಗಳ ಪರಿಹಾರ, ವರದಿ ಮಾಡುವ ಕಾರ್ಯವಿಧಾನ ಮುಂತಾದ ಕ್ರಮಗಳಿಗೆ ಆಡಳಿತ ಇಲಾಖೆ / ಸಂಸ್ಥೆಗಳ ಸಕಾಲಿಕ ಪಾಲುಗಾರಿಕೆ / ಪಾಲ್ಗೊಳ್ಳುವಿಕೆಯು ಅತ್ಯಂತ ಅವಶ್ಯಕವಿರುತ್ತದೆ. ತಮ್ಮ ಇಲಾಖೆಯಡಿ ಗುರುತಿಸಿ ಪಟ್ಟಿ ಮಾಡಲಾದ ಪಿಪಿಪಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ಉತ್ತೇಜಿಸಲು, ಇಲಾಖಾ ಆಂತರಿಕ ಪಿಪಿಪಿ ಕೋಶವನ್ನು ಸೃಜಿಸುವ ಅವಶ್ಯಕತೆ ಇದ್ದು, ಇಲಾಖಾ ಆಂತರಿಕ ಪಿಪಿಪಿ ಕೋಶವು ಸಾಮಾನ್ಯವಾಗಿ ತೀರ್ಮಾನ ತೆಗೆದುಕೊಳ್ಳುವ ಮಟ್ಟದ ಅಧಿಕಾರಿಯನ್ನು ಒಳಗೊಂಡು ತಾಂತ್ರಿಕ, ಆರ್ಥಿಕ, ಕಾನೂನು ಅಧಿಕಾರಿಗಳು ಮತ್ತು ಸಂಬಂಧಪಟ್ಟ ಯೋಜನೆಯ ಹಿರಿಯ ಅಧಿಕಾರಿಯನ್ನು ಒಳಗೊಂಡಂತೆ ಸೃಜಿಸುವ ಅವಶ್ಯಕತೆ ಇರುತ್ತದೆ. ಆಡಳಿತ ಇಲಾಖೆಗಳ ಆಂತರಿಕ ಪಿಪಿಪಿ ಕೋಶದ ಅಧಿಕಾರಿಗಳಿಗೆ / ಸಿಬ್ಬಂದಿಗಳಿಗೆ ಅಗತ್ಯ ಸಾಮರ್ಥ್ಯಾಭಿವೃದ್ಧಿ ತರಬೇತಿಗಳನ್ನ ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಪಿಪಿಪಿ ಕೋಶದಿಂದ ನೀಡುತ್ತಿರುವುದಾಗಿ ತಿಳಿಸುತ್ತಾ, ತಮ್ಮ ಇಲಾಖೆಯ ಆಂತರಿಕ ಪಿಪಿಪಿ ಕೋಶವನ್ನು ಸೃಜಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 127 ಕೈತಇ 2021 ಬೆಂಗಳೂರು,**
**ದಿನಾಂಕ: 09/11/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡಂತೆ ಆಂತರಿಕ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಕೋಶವನ್ನು ಸೃಜಿಸಿ ಆದೇಶಿಸಿದೆ.

| | | |
|---|---|---|
| 1. | ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು. | ಅಧ್ಯಕ್ಷರು |

--2

| | | |
|---|---|---|
| 2. | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು | ಸದಸ್ಯರು |
| 3. | ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು. | ಸದಸ್ಯರು |
| 4. | ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ. | ಸದಸ್ಯರು |
| 5. | ಕಾನೂನು ಕೋಶದ ಮುಖ್ಯಸ್ಥರು, ಆರ್ಥಿಕ, ಕಾರ್ಮಿಕ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | ಸದಸ್ಯರು |
| 6. | ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | ಸದಸ್ಯರು |
| 7. | ಜಂಟಿ ನಿರ್ದೇಶಕರು (ತರಬೇತಿ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು. | ಸದಸ್ಯರು |
| 8. | ಸರ್ಕಾರದ ಅಧೀನ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ | ಸದಸ್ಯರು |
| 9. | ಸಹಾಯಕ ನಿರ್ದೇಶಕರು (ಲೆಕ್ಕಪತ್ರ), ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು. | ಸದಸ್ಯರು |

ಈ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಕೋಶದ ಕಾರ್ಯಚಟುವಟಿಕೆಗಳು PPP Policy -2018 ಅನ್ವಯ ಯೋಜನೆಯ ಪರಿಕಲ್ಪನೆಯಿಂದ ಮುಕ್ತಾಯದವರೆವಿಗೆ ಯೋಜನಾ ಅನುಷ್ಠಾನ ಸಂಸ್ಥೆಯೊಂದಿಗೆ ವಿಷಯವಾರು ಪಾಲ್ಗೊಳ್ಳುವಿಕೆಯಿಂದ ತೀರ್ಮಾನದವರೆಗೆ ಇದ್ದು, ಯೋಜನೆಯ ಕುರಿತು ಆಡಳಿತ ಇಲಾಖೆಯ ಮುಖ್ಯಸ್ಥರಿಗೆ ಸೂಕ್ತ ಶಿಫಾರಸ್ಸನ್ನು ಮಾಡುವವರೆಗೆ ಇರುತ್ತದೆ. ಪ್ರಮುಖವಾಗಿ ಈ ಕೆಳಗಿನ ಚಟುವಟಿಕೆಗಳನ್ನು ಗುರುತಿಸಿದೆ;

1. ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಯೋಜನೆಗಳನ್ನು ಗುರುತಿಸಿ ಪರಿಕಲ್ಪನೆ ರೂಪಿಸುವುದು ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ List of Pipeline PPP Projects ಸಿದ್ಧಪಡಿಸುವುದು.
2. ಸಂಬಂಧಪಟ್ಟ ಭಾಗೀದಾರರೊಂದಿಗೆ (Stake holders) ಸಮಾಲೋಚಿಸಿ ಯೋಜನೆಗಳನ್ನು ಅಭಿವೃದ್ಧಿಪಡಿಸುವುದು.
3. ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಯೋಜನೆಗಳಿಗೆ ಸಲಹೆಗಾರರನ್ನು ಆಯ್ಕೆ ಮಾಡುವುದು.
4. ಸಲಹೆಗಾರರು ಸಿದ್ಧಪಡಿಸಿದ ಪರಿಕಲ್ಪನೆ, ಕಾರ್ಯಸಾಧ್ಯತಾ ಮತ್ತು ಯೋಜನಾ ವರದಿಗಳನ್ನು ಮೌಲ್ಯಮಾಪನ ಮಾಡಲು, ಪಾರದರ್ಶಕ ಸಂಗ್ರಹಣೆ, ಆಂತರಿಕ ಮೌಲ್ಯಮಾಪನ ಮಾರ್ಗಸೂಚಿಗಳನ್ನು ನಿಯಮಾನುಸಾರ ಅಭಿವೃದ್ಧಿಪಡಿಸುವುದು ಹಾಗೂ ಮೌಲ್ಯಮಾಪನ ಮಾಡುವುದು.

5. ವಸ್ತುನಿಷ್ಠೆ, ವಿಶ್ಲೇಷಣೆ ಆಧಾರದ ಮೇಲೆ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಯೋಜನೆಗಳಿಗೆ ಅಗತ್ಯವಿರುವ ಎಲ್ಲಾ ಸಕಾಲಿಕ ಅನುಮೋದನೆಯನ್ನು ಪಡೆಯಲು ನಿಯಮಾನುಸಾರ ಕ್ರಮಕೈಗೊಳ್ಳುವುದು.
6. ಭಾರತ ಸರ್ಕಾರ / ರಾಜ್ಯ ಸರ್ಕಾರದ ಇತರ ಸಾರ್ವಜನಿಕ ಖಾಸಗಿ ಸಹಭಾಗಿತ್ವ (PPP) ಕೋಶಗಳೊಂದಿಗೆ ಸಂವಹನ ನಡೆಸುವುದು.
7. ಅನುಷ್ಠಾನದಲ್ಲಿರುವ ಸಾರ್ವಜನಿಕ ಖಾಸಗಿ ಸಹಭಾಗಿತ್ವದ ಯೋಜನೆಗಳನ್ನು ಪರಿಶೀಲಿಸಿ ಯೋಜನೆಯ ಮುಕ್ತಾಯದವರೆಗೆ ನಿರಂತರ ಮೇಲ್ವಿಚಾರಣೆ ಮಾಡುವುದು.
8. ಇಲಾಖೆಯ ಇತರೆ ಅಧಿಕಾರಿಗಳಿಗೆ ಪಿಪಿಪಿ ಯೋಜನೆಗಳ ಸಾಮರ್ಥ್ಯ ಅಭಿವೃದ್ಧಿ ತರಬೇತಿಗಳ ಆಯೋಜನೆ / ನಿಯೋಜನೆ ಮಾಡುವುದು.
9. ಕಾಲಕಾಲಕ್ಕೆ ಸ್ಥಳ ಪರಿವೀಕ್ಷಣೆ, ಯೋಜನೆಯ ಮೇಲ್ವಿಚಾರಣೆ, ಸಕಾಲಿಕ ಪರಿಶೀಲನೆ, Claims Review and Concession issues ಇತ್ಯಾದಿ ಕೈಗೊಳ್ಳುವುದು.
10. ಆಂತರಿಕ ಪಿಪಿಪಿ ಕೋಶಕ್ಕೆ ಅವಶ್ಯಕತೆಯ ಮೇರೆಗೆ ತಜ್ಞರು / ಸಲಹೆಗಾರರನ್ನು ಸದಸ್ಯರನ್ನಾಗಿ ನೇಮಿಸಿ / ಆಹ್ವಾನಿಸಿಕೊಳ್ಳಬಹುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
09/11/2021
(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ
09/11/2021

**ಇವರಿಗೆ:**

1. ಮಹಾಲೇಖಪಾಲರು (ಎ&ಇ), (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು.
4. ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಕಾನೂನು ಕೋಶದ ಮುಖ್ಯಸ್ಥರು, ಆರ್ಥಿಕ, ಕಾರ್ಮಿಕ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ರಾಜಾಜಿನಗರ, ಬೆಂಗಳೂರು.
8. ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ಗ್ರೇಡ್-2, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
11. ಶಾಖಾಧಿಕಾರಿ 2 / 3
12. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.